# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 42 | Pages. 2 | Date: 10-01-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 42 - ಪುಟಗಳು : 2 | 10-01-2026 | ಶನಿವಾರ | Ph: 8762954248 | ದರ : ₹1


# ಶಾಸಕ ಬಾಲಕೃಷ್ಣ ಮಾತಿಗೆ ಕೆಡಿಪಿ ಸದಸ್ಯರು ಸಿಡಿಮಿಡಿ

## ಕೆಡಿಪಿ ತ್ರೈಮಾಸಿಕ ಸಭೆ | ವಾಗ್ವಾದಕ್ಕೆ ಕಾರಣವಾದ ವಸೂಲಿ ಪದ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಚನ್ನರಾಯಪಟ್ಟಣ: ಶಾಸಕ ಸಿ.ಎನ್. ಬಾಲಕೃಷ್ಣ ಹಾಗೂ ತಾಲ್ಲೂಕು ಪಂಚಾಯಿತಿ ಕೆಡಿಪಿ ನಾಮನಿರ್ದೇಶಿತ ಸದಸ್ಯರ ಮಧ್ಯೆ ವಾಕ್ಸಮರಕ್ಕೆ ತಾಪಂ ಸಭಾಂಗಣ ಶುಕ್ರವಾರ ಸಾಕ್ಷಿಯಾಯಿತು. ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕರು ಮಾತನಾಡಿ, ನಾಮನಿರ್ದೇಶಿತ ಸದಸ್ಯರು ವಸೂಲಿಗೆ ಇಳಿದಿದ್ದಾರೆಂಬ ಹೇಳಿಕೆ ಪರಸ್ಪರ ಆರೋಪ ಪ್ರತ್ಯಾರೋಪಕ್ಕೆ ವೇದಿಕೆ ಮಾಡಿಕೊಟ್ಟಿತು. ಸದಸ್ಯರು ಶಾಸಕರ ವಿರುದ್ಧ ವಾಗ್ದಾಳಿ ನಡೆಸಿದರಲ್ಲದೆ ಹೇಳಿಕೆ ಖಂಡಿಸಿ ಪ್ರತಿಭಟನೆ ನಡೆಸಿದರು. ಹೀಗಾಗಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಯಾರ್ಯಾರ ಬಳಿ ಎಷ್ಟೆಷ್ಟು ವಸೂಲಿ ಮಾಡುತ್ತಿದ್ದೀರಿ ಎಂಬುದೆಲ್ಲಾ ಗೊತ್ತು. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಮುಖ್ಯಮಂತ್ರಿ ಗಮನಕ್ಕೆ ತರುತ್ತೇನೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಅಭಿವೃದ್ಧಿ ವಿಚಾರದಲ್ಲಿ ನನ್ನ ಪಾತ್ರ ಪ್ರಮುಖವಾಗಿದೆ. ಎಲ್ಲಾ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದರು.

### ಅಧಿಕಾರಿಗಳ ಓಲೈಕೆ ಅಭಿವೃದ್ಧಿಯೇ?

ಕೆಡಿಪಿ ಸದಸ್ಯರಿಗೆ ಅಧಿಕಾರಿಗಳು ಸಭೆಯಲ್ಲಿ ಸರಿಯಾದ ಮಾಹಿತಿ ನೀಡುತ್ತಿಲ್ಲ. ಸರ್ಕಾರದಿಂದ ನೇಮಕಗೊಂಡಿರುವ ನಮಗೂ ಸಮಾನ ಗೌರವ ಸಿಗಬೇಕೆಂದು ಸದಸ್ಯರು ಪಟ್ಟು ಹಿಡಿದರು. ಶಾಸಕರು ಅಧಿಕಾರಿಗಳಿಗೆ ಬೆಂಬಲಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಸದಸ್ಯರು ವಾಗ್ವಾದ ನಡೆಸಿದರು.

ಸದಸ್ಯ ಗುರುಪ್ರಸಾದ್ ಮಾತನಾಡಿ, ತಾಲ್ಲೂಕಿನ ಶಾಲಾ, ಕಾಲೇಜುಗಳಲ್ಲಿ ಗಾಂಜಾ, ಡ್ರಗ್ಸ್ ಘಮಲು ಹೆಚ್ಚಿದೆ. ವಿದ್ಯಾರ್ಥಿಗಳು ವ್ಯಾಸಂಗ ಬಿಟ್ಟು ದುಶ್ಚಟಗಳ ದಾಸರಾಗುತ್ತಿದ್ದಾರೆ. ಶಿಕ್ಷಣ ಹಾಗೂ ಪೊಲೀಸ್ ಇಲಾಖೆ ಕಣ್ಮುಚ್ಚಿ ಕುಳಿತಿದೆಯೆಂದು ಆಕ್ರೋಶ ವ್ಯಕ್ತಪಡಿಸಿದರು.

ಖಾಸಗಿ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ನಿರಂತರ ಅತ್ಯಾಚಾರದಿಂದ ಮಗುವಿಗೆ ಜನ್ಮ ನೀಡಿದ್ದಾಳೆ. ಶಾಲೆ ವಿರುದ್ಧ ಯಾವ ಕ್ರಮ ಕೈಗೊಂಡಿದ್ದೀರಿ ಎಂದು ಪ್ರಶ್ನಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ದೀಪಾ ಮಾತನಾಡಿ, ಪ್ರಕರಣ ಸಂಬಂಧ ದೂರು ದಾಖಲಾಗಿದೆ. ಪ್ರಕರಣ ತನಿಖೆಯ ಹಂತದಲ್ಲಿದ್ದು ಶೀಘ್ರವೇ ವರದಿ ಕೈ ಸೇರಲಿದೆ. ಈಗಾಗಲೇ ಶಾಲೆಯ ಮುಖ್ಯಸ್ಥರ ಜೊತೆ ಸಭೆ ನಡೆಸಲಾಗಿದೆ. ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹರೀಶ್, ಸಬ್‌ಇನ್ಸ್‌ಪೆಕ್ಟರ್ ರಘುಪತಿ ಭಟ್, ಪುರಸಭಾ ಮುಖ್ಯಾಧಿಕಾರಿ ಯತೀಶ್, ಕೆಡಿಪಿ ಸದಸ್ಯರಾದ ಕಬ್ಬಾಳು ಮಹೇಶ್, ಯೋಗೇಶ್, ಮಧುದಡಿಘಟ್ಟ, ಸಮೀವುಲ್ಲಾ, ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಎಲ್.ಪಿ.ಪ್ರಕಾಶ್ ಗೌಡ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ್ ಇತರರಿದ್ದರು.

### ಹೋಟೆಲ್ ಪರವಾನಗಿ ನವೀಕರಣ ಇಲ್ಲ

ಪಟ್ಟಣದಲ್ಲಿ ಖಾಸಗಿ ಹೋಟಲ್‌ಗಳ ಪರವಾನಗಿ ನವೀಕರಣಗೊಳ್ಳುತ್ತಿಲ್ಲ. ಅಧಿಕಾರಿಗಳು ಶಾಮೀಲಾಗಿ ಹಣ ವಸೂಲಿ ಮಾಡುತ್ತಿದ್ದಾರೆ. ಕೂಡಲೇ ಹೋಟೆಲ್ ಮಾಲೀಕರ ಸಭೆ ಕರೆಯಬೇಕು. ಅಧಿಕಾರಿಗಳು ನಿರ್ಲಕ್ಷ್ಯ ಭಾವನೆಯಿಂದ ಹೊರಬರಬೇಕು. ಯಾವ ವಿಷಯಕ್ಕೆ ಸಂಬಂಧಿಸಿ ಮಾಹಿತಿ ಕೇಳಿದರೂ ಅಧಿಕಾರಿಗಳು ದುರ್ವರ್ತನೆ ಪ್ರದರ್ಶಿಸುತ್ತಾರೆ. ಈ ಬಗ್ಗೆ ಶಾಸಕರು ಅಧಿಕಾರಿಗಳ ಪರವಾಗಿ ಮಾತನಾಡುತ್ತಿರುವುದು ಸರಿಯಲ್ಲ ಎಂದು ಸದಸ್ಯರು ವಾಗ್ದಾಳಿ ನಡೆಸಿದರು.

# ಜಿಲ್ಲಾಧಿಕಾರಿ ಕಾರು ಜಪ್ತಿಗೆ ಕೋರ್ಟ್ ಸೂಚನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪರಿಹಾರ ವಿತರಣೆ ವಿಳಂಬ ಹಿನ್ನೆಲೆಯಲ್ಲಿ ನ್ಯಾಯಾಲಯ ಆದೇಶದಂತೆ ಜಿಲ್ಲಾಧಿಕಾರಿ ಕಾರು ಜಪ್ತಿಗೆ ಮುಂದಾದ ಘಟನೆ ಶುಕ್ರವಾರ ನಡೆಯಿತು.

ಯಗಚಿ ನಾಲೆಗಾಗಿ ರೈತನಿಂದ ಸ್ವಾಧೀನ ಪಡಿಸಿಕೊಂಡ ಭೂಮಿಗೆ ಪರಿಹಾರ ನೀಡಲು ವಿಳಂಬ ಮಾಡಿದ ಕಾರಣ ಕ್ರಮಕ್ಕೆ ವಕೀಲರು ಬಂದಿದ್ದರು. 15 ವರ್ಷಗಳ ಹಿಂದೆ ಆಲೂರು ತಾಲೂಕಿನ ಭಕ್ತರವಳ್ಳಿ ಗ್ರಾಮದ ರೈತ ಮರಿಗೌಡ ಎಂಬವರಿಗೆ ಸೇರಿದ್ದ ಸರ್ವೆ ನಂ. 44/1 ರಲ್ಲಿ ಹತ್ತುವರೆ ಗುಂಟೆ ಜಮೀನನ್ನು ಯಗಚಿ ನಾಲೆಗಾಗಿ ನೀರಾವರಿ ಇಲಾಖೆ ಸ್ವಾಧಿನಪಡಿಸಿಕೊಂಡಿತ್ತು. ಅದಕ್ಕೆ 11,22,559 ರೂ. ಪರಿಹಾರ ನೀಡಬೇಕಿತ್ತು. ಹದಿನೈದು ವರ್ಷ ಕಳೆದರೂ ಪರಿಹಾರ ನೀಡದ ಹಿನ್ನಲೆ ರೈತ ಮರಿಗೌಡ ಹಾಗು ಅವರ ಮಕ್ಕಳು ನ್ಯಾಯಾಲಯದ ಮೊರೆ ಹೋಗಿದ್ದರು.

ಕೋರ್ಟ್‌ನಿಂದ ಕಾರು ಜಪ್ತಿ ಮಾಡುವಂತೆ ಆದೇಶ ಬಂದ ಹಿನ್ನಲೆ, ಮಧ್ಯಾಹ್ನ ವಕೀಲ ಮಂಜುನಾಥ್ ಜೊತೆ ಆಗಮಿಸಿ ಜಿಲ್ಲಾಧಿಕಾರಿ ಕಾರು ಜಪ್ತಿ ಮಾಡಿದರು. ಈ ವೇಳೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ತಮ್ಮ ಕಚೇರಿಯಲ್ಲಿ ಅಧಿಕಾರಿಗಳ ಸಭೆ ನಡೆಸುತ್ತಿದ್ದರು. ಅವರ ಪರವಾಗಿ ಅಪಾರ ಜಿಲ್ಲಾಧಿಕಾರಿ ಬಿ.ಎ.ಜಗದೀಶ್ ಆಗಮಿಸಿ ಸಂಜೆಯೊಳಗೆ ಪರಿಹಾರ ನೀಡಲಾಗುವುದು ಸಮಯ ಕೊಡಿ ಎಂದು ಎಂದು ಮನವಿ ಮಾಡಿದರು. ಉಪ ವಿಭಾಗಾಧಿಕಾರಿ ಮಾತು ಕೇಳದ ವಕೀಲರು ಹಾಗು ಮರೀಗೌಡ ಪುತ್ರ, ಜಿಲ್ಲಾಧಿಕಾರಿ ಕಾರು ಎಳೆದೊಯ್ಯಲು ಕ್ರೇನ್ ವಾಹನ ತರಿಸಿದರು. ಆದರೆ ಆ ವಾಹನದಲ್ಲಿ ಇನ್ನೋವಾ ಕಾರು ಎಳೆದರೆ ಡ್ಯಾಮೇಜ್ ಆಗಲಿದ್ದು ಕಾರು ಎಳೆದೊಯ್ಯಲು ಆಗುವುದಿಲ್ಲ ಎಂದು ಚಾಲಕ ವಾಪಾಸ್ ಆದರು. ಬಳಿಕ ಸಂಜೆಯೊಳಗೆ ಪರಿಹಾರ ನೀಡುವುದಾಗಿ ಭರವಸೆ ನೀಡಿದ ಹಿನ್ನೆಲೆ ಕಾರನ್ನು ಅಲ್ಲಿಯೇ ಬಿಟ್ಟು ತೆರಳಿದರು.

# ಸ್ವಚ್ಛತೆಗೆ ಸಹಕಾರ ಎಲ್ಲರ ಜವಾಬ್ದಾರಿ: ಶಾಸಕ ಬಾಲಕೃಷ್ಣ



ಚನ್ನರಾಯಪಟ್ಟಣ: ಪ್ರತಿಯೊಬ್ಬರು ವೈಯಕ್ತಿಕ ಸ್ವಚ್ಛತೆ ಜೊತೆಗೆ ಸುತ್ತಲಿನ ಪರಿಸರವನ್ನು ಶುಚಿಯಾಗಿ ಇಟ್ಟುಕೊಳ್ಳುವುದರಿಂದ ಸ್ವಚ್ಛ ಭಾರತ ನಿರ್ಮಾಣ ಸಾಧ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ಶುಕ್ರವಾರ ಪುರಸಭೆ, ಸ್ವಚ್ಛತಾ ಸಿಬ್ಬಂದಿ ಹಾಗೂ ಸರ್ಕಾರಿ ಪ್ರೌಢಶಾಲೆಯಿಂದ ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯಡಿ ಹಮ್ಮಿಕೊಂಡಿದ್ದ ಸ್ವಚ್ಛತಾ ಜಾಥಾಗೆ ಚಾಲನೆ ನೀಡಿ ಮಾತನಾಡಿ, ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆ ಕಾಪಾಡುವುದು ನಮ್ಮೆಲ್ಲರ ಹೊಣೆ. ನಾವು ಬಳಸುವ ಪ್ಲಾಸ್ಟಿಕ್‌ನಿಂದ ಯಾವ ರೀತಿ ಹಾನಿಯಾಗುತ್ತಿದೆ ಎಂದು ಜನಸಾಮಾನ್ಯರಿಗೆ ಅರಿವು ಇಲ್ಲವಾಗಿದೆ. ಈ ಬಗ್ಗೆ ಅರಿವು ಮೂಡಿಸುವ ಕೆಲಸ ಆಗಬೇಕು. ಇಂದು ದೇಶ ಎದುರಿಸುತ್ತಿರುವ ದೊಡ್ಡ ಸಮಸ್ಯೆ ಘನತ್ಯಾಜ್ಯ ನಿರ್ವಹಣೆ. ಆದ್ದರಿಂದ ದೇಶವನ್ನು ಸ್ವಚ್ಛವಾಗಿಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಸ್ವಚ್ಛತೆ ಕೇವಲ ಕಾರ್ಯಕ್ರಮಗಳಿಗೆ ಹಾಗೂ ಅಭಿಯಾನಕ್ಕೆ ಮಾತ್ರ ಸೀಮಿತವಾಗದೆ ನಿತ್ಯದ ಚಟುವಟಿಕೆಯ ಭಾಗವಾಗಬೇಕು ಎಂದರು. ಪುರಸಭಾ ವ್ಯಾಪ್ತಿ ಹೊರತುಪಡಿಸಿ ಹೋಬಳಿಯ ಮುಖ್ಯ ರಸ್ತೆಗಳಲ್ಲಿ ರಾತ್ರಿ ಸಮಯದಲ್ಲಿ ರಸ್ತೆಗೆ ಕಸವನ್ನು ಸುರಿದು ಪರಿಸರಕ್ಕೆ ಹಾನಿ ಮಾಡುತ್ತಿದ್ದು, ಕಸ ಸುರಿಯುವ ಸ್ಥಳದಲ್ಲಿ ಪುರಸಭೆಯಿಂದ ಸಿಸಿಟಿವಿ ಅಳವಡಿಸಿ ಕಸ ಹಾಕುವವರನ್ನು ಪತ್ತೆ ಮಾಡಿ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ದಿನದಿಂದ ದಿನಕ್ಕೆ ಪಟ್ಟಣದಲ್ಲಿ ವಸತಿ ಪ್ರದೇಶ ವರ್ಷದಿಂದ ವರ್ಷಕ್ಕೆ ಬೆಳೆಯುತ್ತಿದ್ದು ಪಟ್ಟಣಕ್ಕೆ ಯುಜಿಡಿ ಸೌಲಭ್ಯ ಕಲ್ಪಿಸಲು 130 ಕೋಟಿ ರೂ.ಗೆ ಪ್ರಸ್ತಾವನೆ ಸಲ್ಲಿಸಿ ಹಲವಾರು ಬಾರಿ ಮನವಿ ಮಾಡಿದ್ದರೂ ಅನುದಾನ ನೀಡಿಲ್ಲವೆಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪುರಸಭಾ ಮುಖ್ಯಾಧಿಕಾರಿ ಆರ್.ಯತೀಶ್ ಕುಮಾರ್, ಕಚೇರಿ ವ್ಯವಸ್ಥಾಪಕಿ ಆಶಾದೇವಿ, ಆರೋಗ್ಯ ನಿರೀಕ್ಷಕ ಮೂರ್ತಿ, ಕಿರಿಯ ಅಭಿಯಂತರ ಬಸವರಾಜು, ಸಮುದಾಯ ಸಂಘಟನಾಧಿಕಾರಿ ಶಾರದಮ್ಮ, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಬಿ.ಆರ್.ರಮೇಶ್, ಶಿಕ್ಷಕರಾದ ಪವಿತ್ರ ಮೇರಿ, ಧನಲಕ್ಷ್ಮಿ, ಈಶ್ವರಚಾರಿ, ವೆಂಕಟೇಶ್, ಸುನಂದ, ಫಯಾಜ್ ವುಲ್ಲಾ, ನಾಗೇಶ್, ವೆಂಕಟೇಶ್, ತಿಪ್ಪೇಸ್ವಾಮಿ ಮತ್ತಿತರರಿದ್ದರು.

# ಜೆಡಿಎಸ್ ಸಮಾವೇಶ ಜಾಗಕ್ಕೆ ಕಾಂಗ್ರೆಸ್ ವಿರೋಧ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಿವೇಶನ ಹಂಚಿಕೆಗೆ ತಯಾರಾಗಿರುವ ಜಾಗದಲ್ಲಿ ಜ. 24 ರಂದು ಜೆಡಿಎಸ್ ಸಮಾವೇಶ ನಡೆಸಲು ಮುಂದಾಗಿದ್ದು ಅದಕ್ಕೆ ಅವಕಾಶ ಮಾಡಬಾರದು ಹಾಗು ಜಾಗ ಅಭಿವೃದ್ಧಿಪಡಿಸಿ ಕೂಡಲೇ ಫಲಾನುಭವಿಗಳಿಗೆ ವಿತರಿಸಬೇಕು ಎಂದು ಕಾಂಗ್ರೆಸ್ ಜಿಲ್ಲಾ ಮಾಧ್ಯಮ ವಕ್ತಾರ ದೇವರಾಜೇಗೌಡ ನೇತೃತ್ವದಲ್ಲಿ ಶುಕ್ರವಾರ ಕೆಐಎಡಿಬಿ ಅಭಿವೃದ್ಧಿ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಗವೇನಹಳ್ಳಿ, ಬುಸ್ತೇನಹಳ್ಳಿ, ಕಸ್ತೂರವಳ್ಳಿ, ಆಡುವಳ್ಳಿ, ಬೊಮ್ಮನಾಯಕನಹಳ್ಳಿ, ರಾಜಘಟ್ಟ, ದೊಡ್ಡ ಹೊನ್ನೇನಹಳ್ಳಿ, ಕಾಚನಾಯಕನಹಳ್ಳಿ ಹಾಗೂ ದೊಡ್ಡಬಸವನಹಳ್ಳಿ ಗ್ರಾಮಸ್ಥರು ಕೋರಿಕೆ ಸಲ್ಲಿಸಿದರು.

ನಮಗೆ ಸೇರಿದ ವ್ಯವಸಾಯ ಜಮೀನನ್ನು ಕೆಐಎಡಿಬಿಯವರು 2007ರಲ್ಲಿ ಸ್ವಾಧೀನ ಮಾಡಿದ್ದಾರೆ. ಆದರೆ ಅದಕ್ಕೆ ಭೂ ಮಾಲೀಕರಿಗೆ ಯಾವುದೇ ಪರಿಹಾರ ನೀಡಿಲ್ಲ. ಸದರಿ ಜಮೀನನ್ನು ಅಭಿವೃದ್ಧಿಪಡಿಸಿ ಭೂಮಿ ಕಳೆದುಕೊಂಡ ರೈತರಿಗೆ ನಿವೇಶನ ಹಂಚಿಕೆ ಮಾಡಿಲ್ಲ.

ಇದರ ವಿರುದ್ಧ ನಾವು ನ್ಯಾಯಾಲಯದ ಮೊರೆ ಹೋಗಿದ್ದು, ಭೂಮಿ ಹಂಚಿಕೆ ಮಾಡುವಂತೆ ಹಾಗೂ ಭೂಸ್ವಾಧೀನ ಪ್ರಕ್ರಿಯೆ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿದ್ದೇವೆ.

ಮನವಿ ಪುರಸ್ಕರಿಸಿರುವ ಹೈಕೋರ್ಟ್, ಅಭಿವೃದ್ಧಿ ಪಡಿಸಿದ ನಿವೇಶನಗಳನ್ನು ರೈತರಿಗೆ ಹಂಚುವಂತೆ ಆದೇಶ ಮಾಡಿದೆ. ಮತ್ತೊಮ್ಮೆ ಕೆಐಎಡಿಬಿ ವಿಳಂಬ ಮಾಡದೆ 90 ದಿನಗಳ ಒಳಗಾಗಿ ನಿವೇಶನ ಹಂಚಿಕೆ ಮಾಡುವಂತೆ ಆದೇಶಿಸಿದೆ. ಆದರೂ ಕೆಐಎಡಿಬಿ ವಿಳಂಬ ಮಾಡುತ್ತಿದೆ. ಭೂಸ್ವಾಧೀನ ಮಾಡಿಕೊಂಡು 19 ವರ್ಷ ಕಳೆದಿದ್ದರೂ ರೈತರಿಗೆ ಯಾವುದೇ ನಿವೇಶನ ನೀಡದೆ ತೊಂದರೆ ಕೊಡುತ್ತಿದ್ದಾರೆ ಎಂದರು.

ಅಭಿವೃದ್ಧಿ ಪಡಿಸಿದ ಜಮೀನು ನೀಡುವಂತೆ ರೈತರು ಎಷ್ಟೇ ಮನವಿ ಮಾಡಿದರೂ, ಇದುವರೆಗೂ ಸ್ಪಂದನೆ ಸಿಕ್ಕಿಲ್ಲ. ಇದರಿಂದ ನಮಗೆ ಅನ್ಯಾಯವಾಗಿದೆ. ನ್ಯಾಯಾಲಯದ ಆದೇಶ ಪಾಲನೆ ಮಾಡಿಲ್ಲ.

ಅದರ ನಡುವೆ ಜೆಡಿಎಸ್ ಪಕ್ಷದಿಂದ ಸದರಿ ಜಾಗದಲ್ಲೇ ಇದ್ದ ಬೆಳೆಯನ್ನು ನಾಶಮಾಡಿ ಸಮಾವೇಶ ಮಾಡಲು ಮುಂದಾಗಿದ್ದಾರೆ. ಇದಕ್ಕೆ ನಮ್ಮ ವಿರೋಧವಿದ್ದು, ರೈತರು ಬೆಳೆದಿದ್ದ ಬೆಳೆ ನಾಶ ಮಾಡಿ, ಲಕ್ಷಗಟ್ಟಲೆ ನಷ್ಟ ಉಂಟು ಮಾಡಿರುತ್ತಾರೆ. ಅಲ್ಲಿ ಸಮಾವೇಶ ಮಾಡುವುದಾದರೆ ಘೋರ ದುರಂತ ನಡೆಯುವ ಸಂಭವವಿದೆ. ಆದ್ದರಿಂದ ಬೆಳೆ ನಾಶ ಮಾಡಿ ಜೆಡಿಎಸ್ ಸಮಾವೇಶ ನಡೆಸಲು ಮುಂದಾಗಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಗ್ರಾಮಸ್ಥರಾದ ರಂಗೇಗೌಡ, ಈರೇಗೌಡ, ಸುಬ್ಬೇಗೌಡ, ಧರ್ಮೇಗೌಡ, ಲೋಕೇಶ್ ಇತರರಿದ್ದರು.

# ಶಾಸಕರಿಂದ ಮೊದಲ ತಿಂಗಳ ವೇತನ ಪಡೆದ ಯುವತಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ತಂದೆಯ ಅಕಾಲಿಕ ನಿಧನದಿಂದ ಸಂಕಷ್ಟಕ್ಕೆ ಸಿಲುಕಿದ ಬಡ ಕುಟುಂಬದ ಯುವತಿಗೆ ತಾಲೂಕು ಆಸ್ಪತ್ರೆಯಲ್ಲಿ ಉದ್ಯೋಗ ಕಲ್ಪಿಸಿ ಮೊದಲ ತಿಂಗಳ ವೇತನದ ಚೆಕ್ ಅನ್ನು ಶಾಸಕ ಸಿಮೆಂಟ್ ಮಂಜು ವಿತರಿಸಿದರು.

ಪಟ್ಟಣದ ತಾಲೂಕು ಆಸ್ಪತ್ರೆಯಲ್ಲಿ ಸುಮಾರು ಒಂದು ತಿಂಗಳ ಹಿಂದೆ ಹೃದಯಾಘಾತದಿಂದ ನಿಧನರಾದ ನವೀದ್ ಪಾಷಾ ಅವರ ಪುತ್ರಿ ಜವೇರಿಯಾ ಅವರಿಗೆ ಶಾಸಕರು ವೇತನದ ಚೆಕ್ ಹಸ್ತಾಂತರಿಸಿದರು. ನವೀದ್ ಪಾಷಾ ಅವರು ಬಡ ಕುಟುಂಬದ ಸಂಪೂರ್ಣ ಜವಾಬ್ದಾರಿಯನ್ನು ಹೊತ್ತಿದ್ದವರಾಗಿದ್ದು, ಅವರ ದಿಢೀರ್ ಸಾವಿನಿಂದ ಕುಟುಂಬ ಆರ್ಥಿಕವಾಗಿ ಕಂಗಾಲಾಗಿತ್ತು. ಕುಟುಂಬದ ಪರಿಸ್ಥಿತಿಯನ್ನು ಮನಗಂಡು ಶಾಸಕ ಸಿಮೆಂಟ್ ಮಂಜು ಅವರ ಸೂಚನೆಯ ಮೇರೆಗೆ ನವೀದ್ ಪಾಷಾ ಅವರ ಪುತ್ರಿಗೆ ತಾಲೂಕು ಆಸ್ಪತ್ರೆಯಲ್ಲಿ ಉದ್ಯೋಗ ನೀಡಲಾಗಿತ್ತು. ಕೆಲಸಕ್ಕೆ ಸೇರಿದ ಒಂದು ತಿಂಗಳ ನಂತರ ಮೊದಲ ತಿಂಗಳ ವೇತನದ ಚೆಕ್ ಅನ್ನು ಶಾಸಕರಿಂದಲೇ ಪಡೆಯಬೇಕೆಂದು ಯುವತಿ ಬಯಸಿದ ಹಿನ್ನೆಲೆಯಲ್ಲಿ ಶಾಸಕರು ಸ್ವತಃ ಚೆಕ್ ವಿತರಿಸಿದರು.

# ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಸ್ಮೈಲ್ ಮದರ್ ದಿನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪ್ರತಿನಿತ್ಯ ಕುಟುಂಬಕ್ಕಾಗಿ ದುಡಿಯುವ ಮಹಿಳೆಯರು ತಮ್ಮ ಬಗ್ಗೆ ತಾವೇ ಅರಿತುಕೊಳ್ಳುವುದು, ತಮಗಾಗಿ ಸ್ವಲ್ಪ ಸಮಯ ಮೀಸಲಿಡುವ ಅಗತ್ಯತೆ ಇದೆಯೆಂದು ಸಂಪ್ರದಾಯ ಫೌಂಡೇಷನ್ ಸಂಪನ್ಮೂಲ ವ್ಯಕ್ತಿ ಚೇತನ್ ಹೇಳಿದರು.

ನಗರದ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಶುಕ್ರವಾರ ಏರ್ಪಡಿಸಿದ್ದ ತಾಯಂದಿರಿಗಾಗಿ ಐಸ್ಮೈಲ್ ಮದರ್‌ಟಿ ಒಂದು ದಿನದ ವಿಶೇಷ ಕಾರ್ಯಕ್ರಮದಲ್ಲಿ ಮಾತನಾಡಿ, ಮಗುವಿನ ಸಂತೋಷಕ್ಕಾಗಿ ತನ್ನೆಲ್ಲಾ ನೋವುಗಳನ್ನು ಮರೆಮಾಚಿ, ಪ್ರೀತಿ, ಕರುಣೆ, ಸಹನೆ ಹಾಗು ಪ್ರೋತ್ಸಾಹದ ಪ್ರತೀಕವಾಗಿ ತಾಯಿ ತನ್ನ ಜವಾಬ್ದಾರಿ ನಿಭಾಯಿಸುತ್ತಾಳೆ ಎಂದರು.

ಮಕ್ಕಳ ಮನೋವಿಜ್ಞಾನ, ಬೆಳವಣಿಗೆಯಲ್ಲಿ ತಂದೆ-ತಾಯಿಯರ ಪೋಷಕತ್ವದ ಪಾತ್ರ ಹಾಗೂ ಇತ್ತೀಚಿನ ದಿನಗಳಲ್ಲಿ ಮಕ್ಕಳು ಮೊಬೈಲ್‌ಗೆ ಅತಿಯಾದ ಆಸಕ್ತಿ ಹೊಂದಿರುವುದರಿಂದ ಉಂಟಾಗುವ ಸಮಸ್ಯೆ ಮತ್ತು ಅದರಿಂದ ಮಕ್ಕಳನ್ನು ದೂರವಿಡುವ ಮಾರ್ಗಗಳ ಬಗ್ಗೆ ವಿವರಿಸಿದರು.

ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್. ಚಂದ್ರಶೇಖರ್ ಮಾತನಾಡಿ, ಅಮ್ಮ ಎಂದರೆ ಶಬ್ದಗಳಿಗೆ ನಿಲುಕದ, ಭಾವನೆಗಳನ್ನು ಮೀರಿದ ಶಕ್ತಿ. ಅಂತಹ ಮಹಾನ್ ತಾಯಂದಿರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ ಎಂದರು. ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಮತ್ತಿತರರಿದ್ದರು.

# 223 ಕೋಟಿ ರೂ. ವಿದ್ಯುತ್ ಬಿಲ್ ಬಾಕಿ

## ಎತ್ತಿನಹೊಳೆ ಯೋಜನಾ ಮುಖ್ಯ ಕಚೇರಿಗೆ ಪವರ್ ಕಟ್ | ಕತ್ತಲಲ್ಲಿ ಕಚೇರಿ

ವರದಿ : ಪ್ರದೀಪ್ ಬಾಳ್ಳುಪೇಟೆ

ಸಕಲೇಶಪುರ: ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದ ಮುಖ್ಯ ಕಚೇರಿ, ಕೋಟ್ಯಂತರ ರೂ. ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡ ಪರಿಣಾಮ ವಿದ್ಯುತ್ ಸರಬರಾಜು ಕಡಿತಗೊಂಡು ಕಚೇರಿ ಕತ್ತಲಿನಲ್ಲಿ ಮುಳುಗಿದೆ.

ಎತ್ತಿನಹೊಳೆ ಯೋಜನೆ ಕರ್ನಾಟಕದ ಪ್ರಮುಖ ಹಾಗೂ ಮಹತ್ವಾಕಾಂಕ್ಷಿ ನೀರಾವರಿ ಯೋಜನೆಯಾಗಿದ್ದು, ಪಶ್ಚಿಮ ಘಟ್ಟದಲ್ಲಿ ಹರಿಯುವ ಎತ್ತಿನಹೊಳೆ ಹಾಗೂ ಇತರ ತೊರೆಗಳಿಂದ 24.01 ಟಿಎಂಸಿ ನೀರನ್ನು ಬರಪೀಡಿತ ಬಯಲು ಸೀಮೆಯ ಜಿಲ್ಲೆಗಳಿಗೆ ಹರಿಸುವ ಉದ್ದೇಶ ಹೊಂದಿದೆ. ಮಲೆನಾಡಿನಲ್ಲಿ ಹುಟ್ಟುವ ಅನೇಕ ಸಣ್ಣಹೊಳೆಗಳ ನೀರು ಎತ್ತಿನಹೊಳೆಯಾಗಿ ಕುಮಾರಧಾರಾ ಹಾಗೂ ನೇತ್ರಾವತಿ ನದಿಗಳ ಮೂಲಕ ಪಶ್ಚಿಮಾಭಿಮುಖವಾಗಿ ಅರಬ್ಬಿ ಸಮುದ್ರ ಸೇರುತ್ತಿದ್ದ ನೀರನ್ನು ಇದೀಗ ಪೂರ್ವಾಭಿಮುಖವಾಗಿ ಬಂಗಾಳ ಕೊಲ್ಲಿಯತ್ತ ಹರಿಸಿರುವುದು ಇತಿಹಾಸದಲ್ಲೇ ಅಪೂರ್ವವಾಗಿದೆ.




ಈ ಯೋಜನೆಯ ಮೂಲಕ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ, ಕೋಲಾರ ಸೇರಿ 29 ತಾಲೂಕುಗಳ 6,657 ಗ್ರಾಮಗಳಿಗೆ



ಕುಡಿಯುವ ನೀರು ಒದಗಿಸುವುದು ಹಾಗೂ ಕೆರೆಗಳನ್ನು ತುಂಬಿಸುವ ಗುರಿ ಹೊಂದಲಾಗಿದೆ. ಆದರೆ ಎತ್ತಿನಹೊಳೆ ಯೋಜನೆಯ ಎರಡನೇ ಹಂತದ ಕಾಮಗಾರಿ ಅರಸಿಕೇರೆ ಸಮೀಪ ಅರಣ್ಯ ಇಲಾಖೆಯಿಂದ ಅನುಮತಿ ವಿಳಂಬವಾಗಿರುವುದು ಸೇರಿ ಹಲವು ಕಾರಣಗಳಿಂದ ಮಂದಗತಿಯಲ್ಲಿ ಸಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಈ ಬಾರಿ ಎತ್ತಿನಹೊಳೆ ನೀರನ್ನು ಹೇಮಾವತಿ ನದಿಗೆ ಹರಿಸಲಾಗಿದೆ. ರಾಜ್ಯದಲ್ಲಿ ಉತ್ತಮ ಮಳೆಯಾದ ಕಾರಣ ಜಲಾಶಯಗಳು ತುಂಬಿರುವುದರಿಂದ ಎತ್ತಿನಹೊಳೆ ನೀರು ಹೇಮಾವತಿ ಮುಖಾಂತರ ಗೊರೂರಿಗೆ ಸಾಗಿ, ಅಲ್ಲಿಂದ ಕೆಆರ್‌ನಗರ ಸಮೀಪ ಕೆಆರ್‌ಎಸ್ ವ್ಯಾಲಿಯಲ್ಲಿ ಕಾವೇರಿ ನದಿಗೆ ವಿಲೀನಗೊಂಡು ನಂತರ ಕೆಆರ್‌ಎಸ್ ಹಾಗೂ ಕಬಿನಿ ಮೂಲಕ ತಮಿಳುನಾಡಿನ ಮೆಟ್ಟೂರು ಜಲಾಶಯ ತಲುಪಿ ಹೆಚ್ಚುವರಿ ನೀರು ಬಂಗಾಳ ಕೊಲ್ಲಿಗೆ ಹರಿದಿದೆ. ಎತ್ತಿನಹೊಳೆ ಯೋಜನೆಯ ಎರಡನೇ ಹಂತ ಪೂರ್ಣಗೊಳ್ಳದ ಕಾರಣ ಈ ಬಾರಿ ನೀರನ್ನು ಹೇಮಾವತಿಗೆ ಹರಿಸಲಾಗಿದ್ದು, ಅದಕ್ಕಾಗಿ ಅಪಾರ ಪ್ರಮಾಣದ ವಿದ್ಯುತ್ ವ್ಯಯ ಮಾಡಲಾಗಿದೆ. 2024ರ ಸೆಪ್ಟೆಂಬರ್‌ನಲ್ಲಿ ಯೋಜನೆಗೆ ಚಾಲನೆ ನೀಡಲಾಗಿದ್ದು, ಹಾಸನ, ಚಿಕ್ಕಮಗಳೂರು ಹಾಗೂ ದ್ವಾರಸಮುದ್ರ, ವೇದವ್ಯಾಲಿ, ವಾಣಿವಿಲಾಸ ಕೆರೆಗಳಿಗೆ ತಾಲೂಕಿನ ಹೆಬ್ಬನಹಳ್ಳಿಯಿಂದ ನೀರನ್ನು ಪಂಪ್ ಮಾಡಿ ಹರಿಸಲಾಗಿತ್ತು.

2024ರಲ್ಲಿ ಸುಮಾರು 1.5 ಟಿಎಂಸಿ ನೀರು ಹರಿಸಲಾಗಿದ್ದು, ಅದಕ್ಕಾಗಿ 14 ಮೆಗಾವ್ಯಾಟ್ ವಿದ್ಯುತ್ ಬಳಕೆಯಾಗಿದೆ. ಸುಮಾರು 52 ಕೋಟಿ ರೂ. ವಿದ್ಯುತ್ ಬಿಲ್ ಪಾವತಿಸಬೇಕಾಗಿತ್ತು. 2025ರಲ್ಲಿ ಉತ್ತಮ ಮಳೆಯ ಹಿನ್ನೆಲೆಯಲ್ಲಿ ಜಲಾಶಯಗಳು ತುಂಬಿದ್ದರೂ, ಎತ್ತಿನಹೊಳೆಯಿಂದ ಹೇಮಾವತಿಗೆ ಸುಮಾರು 2 ಟಿಎಂಸಿ ಹಾಗೂ ಇತರ ಕೆರೆಗಳಿಗೆ 0.3 ಟಿಎಂಸಿ ನೀರನ್ನು ಹರಿಸಲಾಗಿದೆ. ಇದಕ್ಕೆ ಒಟ್ಟು 18.25 ಮೆಗಾವ್ಯಾಟ್ ವಿದ್ಯುತ್ ವ್ಯಯವಾಗಿದೆ.

### ಮಾಸಿಕ 10 ಕೋಟಿ ರೂ. ವಿದ್ಯುತ್ ಬಿಲ್

ಒಟ್ಟಾರೆ ಎತ್ತಿನಹೊಳೆ ಯೋಜನೆಯಿಂದ ನೀರು ಹರಿಸಿದ ಹಿನ್ನೆಲೆಯಲ್ಲಿ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತವು ಕೆಪಿಟಿಸಿಎಲ್‌ಗೆ ಸುಮಾರು 223 ಕೋಟಿ ರೂ. ಪಾವತಿಸಬೇಕಿದೆ. ಪ್ರತಿಮಾಸ ಕನಿಷ್ಠ 9ರಿಂದ 10 ಕೋಟಿ ರೂ. ಮೊತ್ತವನ್ನು ಪಾವತಿಸಬೇಕಾದರೂ ದೀರ್ಘಕಾಲದಿಂದ ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿರುವುದು ಗಂಭೀರವಾಗಿದೆ.

ಈ ಕುರಿತು ವಿದ್ಯುತ್ ನಿಗಮಕ್ಕೆ ಹಲವು ಬಾರಿ ನೋಟಿಸ್ ನೀಡಿದ್ದರೂ ಬಿಲ್ ಪಾವತಿಯಾಗದೆ ಉಳಿದ ಹಿನ್ನೆಲೆಯಲ್ಲಿ ಕೊನೆಗೆ ಯೋಜನಾ ಕಚೇರಿಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗಿದೆ. ಪರಿಣಾಮ ಕಚೇರಿಯ ದೈನಂದಿನ ಕಾರ್ಯಚಟುವಟಿಕೆಗಳು ಸಂಪೂರ್ಣ ಅಸ್ತವ್ಯಸ್ತಗೊಂಡಿವೆ. ಕಂಪ್ಯೂಟರ್, ದಾಖಲೆ ಸಂರಕ್ಷಣೆ, ಆನ್‌ಲೈನ್ ವರದಿ ಸಲ್ಲಿಕೆ, ಸಭೆಗಳು ಸೇರಿದಂತೆ ಆಡಳಿತಾತ್ಮಕ ಕಾರ್ಯಗಳನ್ನು ಜನರೇಟರ್ ಮೂಲಕವೇ ನಿರ್ವಹಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಕನ್ನಡ ಪೋಸ್ಟ್



# ರಾಜ್ಯಾದ್ಯಂತ ಡಿಜಿಟಲ್ ಲೈಬ್ರರಿಗೆ ಎಳ್ಳು ನೀರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಸಾರ್ವಜನಿಕರು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಓದುವವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ರಾಜ್ಯಾದ್ಯಂತ ಜಾರಿಗೊಳಿಸಿದ್ದ ಡಿಜಿಟಲ್ ಲೈಬ್ರರಿ ವ್ಯವಸ್ಥೆ ಕಳೆದ ಒಂದು ವರ್ಷದಿಂದ ಸ್ಥಗಿತಗೊಂಡಿದೆ.

ನಗರ ಕೇಂದ್ರ ಗ್ರಂಥಾಲಯ ಸೇರಿ ಜಿಲ್ಲೆಯ ಎಂಟು ಕಡೆ ಡಿಜಿಟಲ್ ಗ್ರಂಥಾಲಯವನ್ನು ನಾಲ್ಕು ವರ್ಷಗಳ ಹಿಂದೆ ಅನುಷ್ಠಾನಗೊಳಿಸಲಾಗಿತ್ತು. ಆದರೆ, ಜವಾಬ್ದಾರಿ ವಹಿಸಿಕೊಂಡಿದ್ದ ಕೆಡಿಪಿಎಲ್ ಎಂಬ ಸಂಸ್ಥೆಯ ಅವಧಿ ಮೂರು ವರ್ಷಕ್ಕೆ ಪೂರ್ಣಗೊಂಡಿದ್ದು ನಂತರ ಅದು ಸ್ಥಗಿತಗೊಳಿಸಿದೆ. ಡಿಜಿಟಲ್ ಗ್ರಂಥಾಲಯಕ್ಕೆ ಬೇಡಿಕೆಯಿದ್ದರೂ ಸರ್ಕಾರದ ಮಟ್ಟದಲ್ಲಿ ಪ್ರಕ್ರಿಯೆ ನಡೆದಿಲ್ಲ. ಸದಸ್ಯತ್ವ ಪಡೆದ ಓದುಗರು ಅದರಿಂದ ಪ್ರಯೋಜನ ಪಡೆಯದಂತಾಗಿದೆ. ಇನ್ನು ಆ ಉದ್ದೇಶಕ್ಕಾಗಿಯೇ ಅಳವಡಿಸಿದ್ದ ಕಂಪ್ಯೂಟರ್‌ಗಳು ದೂಳು ಹಿಡಿದಿವೆ. ಕೆಲವೆಡೆ ಕಚೇರಿ ಕೆಲಸಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆ. ಜಗತ್ತು ಆಧುನಿಕ ತಂತ್ರಜ್ಞಾನದ ಜೊತೆಗೆ ಪೈಪೋಟಿ ನಡೆಸುತ್ತಿರುವ ದಿನಗಳಲ್ಲಿ ಗ್ರಂಥಾಲಯ ವ್ಯವಸ್ಥೆ ಮಾತ್ರ ವರ್ಷದಿಂದ ವರ್ಷಕ್ಕೆ ಹಿಂದಿನ ದಿನಗಳಿಗೆ ಮರಳುವ ಪರಿಸ್ಥಿತಿ ನಿರ್ಮಾಣವಾಗಿದೆ.

ಕೆಲವು ಪುಸ್ತಕಗಳು ಮುದ್ರಣ ರೂಪದಲ್ಲಿ ಸಿಗುವುದಿಲ್ಲ. ಅಂತವುಗಳನ್ನು ಆನ್‌ಲೈನ್‌ನಲ್ಲಿ ಓದಬಹುದು. ಅದಕ್ಕಾಗಿ ಡಿಜಿಟಲ್ ಗ್ರಂಥಾಲಯ ಪರಿಕಲ್ಪನೆ ಅನುಷ್ಠಾನಗೊಳಿಸಲಾಯಿತು. ಇ-ಲೈಬ್ರರಿಗೆ ಸದಸ್ಯತ್ವ ಪಡೆದವರು ದಿನದ ಒಂದು ಗಂಟೆ ಗ್ರಂಥಾಲಯದ ಕಂಪ್ಯೂಟರ್ ಆನ್ ಮಾಡಿಕೊಂಡು ತಮಗೆ ಬೇಕಾದ ಮಾಹಿತಿಯನ್ನು ಓದಬಹುದಿತ್ತು. ಅದಕ್ಕಿಂತ ಹೆಚ್ಚು ಅವಧಿ ಕೂರುವುದಾದರೆ ಗಂಟೆಗೆ 10 ರೂ. ಶುಲ್ಕವನ್ನು ಸರ್ಕಾರ ನಿಗದಿಪಡಿಸಿತ್ತು. ಹಾಸನದ ಡಿಜಿಟಲ್ ಗ್ರಂಥಾಲಯದಲ್ಲಿ 100ಕ್ಕೂ ಹೆಚ್ಚು ಜನರು ಸದಸ್ಯತ್ವ ಪಡೆದಿದ್ದಾರೆ. ಆದರೆ ಕಳೆದ ಒಂದು ವರ್ಷದಿಂದ ಅವರು ಓದುವ ಅವಕಾಶವನ್ನೇ ಕಳೆದುಕೊಂಡಿದ್ದಾರೆ. ಈ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಎಲ್ಲಾ ಜಿಲ್ಲೆಗಳಲ್ಲೂ ಡಿಜಿಟಲ್ ಗ್ರಂಥಾಲಯಕ್ಕೆ ಅಂಕುಶ ಬಿದ್ದಿದೆ ಎಂದು ಗ್ರಂಥಾಲಯ ನೌಕರರೊಬ್ಬರು ಹೇಳಿದರು.

ಇನ್ನು ಜಿಲ್ಲಾ ಗ್ರಂಥಾಲಯದಲ್ಲಿ ಸದಸ್ಯತ್ವ ಪಡೆದವರಿಗೆ ಪುಸ್ತಕ ನೀಡುವ ಪದ್ಧತಿ ಮುಂದುವರಿದಿದ್ದು, ಇಷ್ಟು ದಿವಸ ಬರಹ ರೂಪದಲ್ಲಿ ದಾಖಲಾಗುತ್ತಿದ್ದ ಪುಸ್ತಕ ತಿರುವಳಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸಲಾಗುತ್ತಿದೆ. ನಗರ ಕೇಂದ್ರ ಗ್ರಂಥಾಲಯದಲ್ಲಿ ಒಟ್ಟು 2.50 ಲಕ್ಷ ಪುಸ್ತಕಗಳಿದ್ದು ಸದಸ್ಯತ್ವ ಹೊಂದಿರುವ 14 ಸಾವಿರ ಜನರು ಪುಸ್ತಕ ಪಡೆಯಬಹುದು. ಅದನ್ನು ನಿಗದಿತ ಸಮಯಕ್ಕೆ ಮರಳಿಸದಿದ್ದರೆ ಆನ್‌ಲೈನ್‌ಲ್ಲಿ ಎಚ್ಚರಿಕೆ ಸಂದೇಶ ಬರುತ್ತದೆ. ಮೊದಲೆಲ್ಲಾ ದಾಖಲಾತಿ ಪುಸ್ತಕದಲ್ಲಿ ಅದನ್ನು ಬರೆಯಲಾಗುತ್ತಿತ್ತು. ಈಗ ಆನ್‌ಲೈನ್ ಆಗಿರುವುದರಿಂದ ಪುಸ್ತಕ ಪಡೆದವರ ವಿವರ ಎಲ್ಲವೂ ಕ್ಷಣಮಾತ್ರದಲ್ಲಿ ಲಭ್ಯವಾಗುತ್ತಿದೆ. ಹೀಗಾಗಿ ಪುಸ್ತಕ ಪಡೆದು ವಾಪಾಸ್ ಕೊಡದೇ ಇರುವವರ ಸಂಖ್ಯೆ ಕಡಿಮೆಯಾಗಿದೆ.

ನೂತನ ಗ್ರಂಥಾಲಯ ಕಟ್ಟಡ ಕಾಮಗಾರಿ ಅರ್ಧಕ್ಕೆ ನಿಂತಿದ್ದು ಬಾಕಿ 75 ಲಕ್ಷ ರೂ. ಅನುದಾನ ಲಭ್ಯವಾಗದೆ ಭಾರೀ ಸಮಸ್ಯೆಯಾಗಿದೆ. ಬಿಜೆಪಿ ಸರ್ಕಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಜೆ.ಮಾಧುಸ್ವಾಮಿ ಅವರು ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿದ್ದರು. ಪೂರ್ತಿ ಅನುದಾನ ಬಿಡುಗಡೆಯಾಗದೆ ಕೆಲಸ ಅರ್ಧಕ್ಕೆ ನಿಂತಿದ್ದು ಪುಂಡ ಪೋಕರಿಗಳ ತಾಣವಾಗಿ ಮಾರ್ಪಟ್ಟಿದೆ. ಬಾಕಿ ಹಣಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ.

# ಟಿಇಟಿ ನಿಯಮಾವಳಿಗೆ ವಿರೋಧ: ಶಿಕ್ಷಕರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಸುಪ್ರೀಂಕೋರ್ಟ್ ಆದೇಶದ ಅನ್ವಯ ಜಾರಿಗೊಳಿಸಿರುವ ಟೀಚರ್ ಎಲಿಜಿಬಿಲಿಟಿ ಟೆಸ್ಟ್ (ಟಿಇಟಿ) ನಿಯಮಾವಳಿಗೆ ವಿರೋಧ ವ್ಯಕ್ತಪಡಿಸಿ ಪ್ರಾಥಮಿಕ ಶಾಲಾ ಶಿಕ್ಷಕರು ಕಪ್ಪುಪಟ್ಟಿ ಧರಿಸಿ ನಗರದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಎದುರು ಸಾಂಕೇತಿಕ ಪ್ರತಿಭಟನೆ ನಡೆಸಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷೆ ಚೈತ್ರ ನಾಯಕರಹಳ್ಳಿ ಮಾತನಾಡಿ, ಕಳೆದ 25 ರಿಂದ 30 ವರ್ಷ ಸೇವೆ ಸಲ್ಲಿಸಿರುವ ಶಿಕ್ಷಕರಿಗೂ ಸಹ ಟಿಇಟಿ ಪರೀಕ್ಷೆಯನ್ನು ಅನ್ವಯಿಸುವ ಆದೇಶ ಅನ್ಯಾಯಕಾರಿಯಾಗಿದೆ. ಈ ಹಿನ್ನೆಲೆ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸುವಂತೆ ಸಂಘದ ರಾಜ್ಯಾಧ್ಯಕ್ಷರಾದ ಚಂದ್ರಶೇಖರ್, ಗೌರವಾಧ್ಯಕ್ಷರಾದ ನಾಗೇಶ್ ಹಾಗೂ ಕಾರ್ಯದರ್ಶಿ ಚೇತನ್ ಅವರ ಸೂಚನೆಯಂತೆ ರಾಜ್ಯದಾದ್ಯಂತ ಶಿಕ್ಷಕರು ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಪಾಠ ಬೋಧನೆಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಶಾಲಾ ವೇಳೆಯಲ್ಲಿಯೇ ಕಪ್ಪುಪಟ್ಟಿ ಧರಿಸಿ ಸಂಕೇತಿಕವಾಗಿ ವಿರೋಧ ವ್ಯಕ್ತಪಡಿಸಲಾಗುತ್ತಿದೆ. ಮಕ್ಕಳ ಶಿಕ್ಷಣಕ್ಕೆ ಯಾವುದೇ ಅಡಚಣೆ ಆಗದಂತೆ ಶಾಂತಿಯುತವಾಗಿ ಹೋರಾಟ ನಡೆಸಲಾಗುತ್ತಿದೆ. ಕೇಂದ್ರ ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ಈಗಾಗಲೇ ದೆಹಲಿಯ ಜಂತರ್ ಮಂತರ್‌ನಲ್ಲಿ ರಾಜ್ಯದ ಎಲ್ಲಾ ಶಿಕ್ಷಕರು ಟಿಇಟಿ ವಿರೋಧಿಸಿ ಬೃಹತ್ ಪ್ರತಿಭಟನೆ ನಡೆಸಿದ್ದರು. ಅದರ ಮುಂದುವರಿದ ಭಾಗವಾಗಿ ಗುರುವಾರ ಎಲ್ಲಾ ಶಿಕ್ಷಕರು ಕಪ್ಪುಪಟ್ಟಿ ಧರಿಸಿ ಶಾಲೆಗೆ ಆಗಮಿಸಿದ್ದಾರೆ ಎಂದು ಹೇಳಿದರು.

25 ರಿಂದ 30 ವರ್ಷ ಸೇವೆ ಸಲ್ಲಿಸಿದ ಶಿಕ್ಷಕರ ಸೇವೆಯನ್ನು ಪರಿಗಣಿಸಬೇಕು ಹಾಗೂ ಟಿಇಟಿ ನಿಯಮವನ್ನು ಹಿಂತೆಗೆದುಕೊಳ್ಳಬೇಕೆಂದು ರಾಜ್ಯ ಮತ್ತು ಕೇಂದ್ರ ಸರ್ಕಾರಗಳನ್ನು ಆಗ್ರಹಿಸಿದರು. ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕ್ರೀಡಾ ಕಾರ್ಯದರ್ಶಿ ಬಿ.ಕೆ.ರವೀಂದ್ರ, ಶಿಕ್ಷಕರ ಸಂಘದ ಗುಡುಗನಹಳ್ಳಿ ಮಂಜುನಾಥಗೌಡ, ಲೋಹಿತ್ ಜವರಪ್ಪ, ಹೆಚ್.ಆರ್.ಶೇಖರ್, ಶಿಕ್ಷಕರಾದ ಅಂತೋಣಿಯಮ್ಮ ವೈಲೇಟ್, ಹರೀಶ್ , ಶೈಲಜಾ, ವಿಜಯ, ಮಂಜುನಾಥ ಇತರರು ಉಪಸ್ಥಿತರಿದ್ದರು.

# ಮಕ್ಕಳಿಗೆ ಪಠ್ಯದ ಜೊತೆ ಮಾನವೀಯ ಮೌಲ್ಯ ಕಲಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಚನ್ನರಾಯಪಟ್ಟಣ: ಶಿಕ್ಷಣ ಸಂಸ್ಥೆಗಳು ಶಿಕ್ಷಣದ ಮೌಲ್ಯವನ್ನು ಎತ್ತಿ ಹಿಡಿಯಬೇಕು. ಶಾಲೆಗಳಲ್ಲಿ ಪಠ್ಯದ ಜೊತೆಗೆ ಮಕ್ಕಳಿಗೆ ಮಾನವೀಯ ಮೌಲ್ಯವನ್ನು ಕಲಿಸುವ ನಿಟ್ಟಿನಲ್ಲಿ ಶಿಕ್ಷಕರು ನೀತಿ ಪಾಠ, ರಾಮಾಯಣ, ಮಹಾಭಾರತದ ಕಥೆಗಳನ್ನು ತಿಳಿಸುವ ಕೆಲಸವಾಗಬೇಕೆಂದು ಶಾಸಕ ಸಿ.ಎನ್ .ಬಾಲಕೃಷ್ಣ ಹೇಳಿದರು.

ಪಟ್ಟಣದ ಅಕ್ಷರ ಸ್ಕೂಲ್ ಎಕ್ಸೆನ್ಸ್ ಶಾಲೆಯಲ್ಲಿ ನಡೆದ ಅಕ್ಷರ ಕಲಾ ವೈವಿಧ್ಯಮ್ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಸಂಸ್ಕಾರಯುತ ಶಿಕ್ಷಣಕ್ಕೆ ಒತ್ತು ನೀಡಬೇಕು. ನಮ್ಮ ನಡವಳಿಕೆ ಆಧಾರದ ಮೇಲೆ ಸಮಾಜದಲ್ಲಿ ಗೌರವ ಸಿಗುತ್ತದೆ. ಗುರಿ ಮುಟ್ಟುವ ತನಕ ಹಿಂದುರುಗಿ ನೋಡಬಾರದು. ಯಶಸ್ಸು ದೊರೆತ ಬಳಿಕ ನಮ್ಮ ಶ್ರೇಯಸ್ಸಿಗೆ ಕಾರಣರಾದವರನ್ನು ಮರೆಯಬಾರದು ಎಂದು ಹೇಳಿದರು. ಮಕ್ಕಳ ಜತೆಗೆ ಪೋಷಕರು ಸಂವಹನ ನಡೆಸಬೇಕು. ಅವರ ಚಲನವಲನವನ್ನು ಗಮನಿಸಬೇಕು. ಅವರು ಮಾಡುವ ಒಳ್ಳೆ ಕೆಲಸಕ್ಕೆ ಬೆಂಬಲ ನೀಡಿದರೆ ಆತ್ಮಸ್ಥೈರ್ಯ ವೃದ್ಧಿಯಾಗಿ ಗುರಿ ಸಾಧಿಸುತ್ತಾರೆ. ಗುಣಮಟ್ಟದ ಶಿಕ್ಷಣದಿಂದ ವಿದ್ಯಾರ್ಥಿಗಳ ಭವಿಷ್ಯ ಚೆನ್ನಾಗಿರುತ್ತದೆ. ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕಾದರೆ ಶಿಕ್ಷಣದೊಂದಿಗೆ ಪಠ್ಯೇತರ ಚಟುವಟಿಕೆಗಳಾದ ಕಲೆ, ಸಂಗೀತ, ಸಾಹಿತ್ಯ, ಸಾಂಸ್ಕೃತಿಕ ಹಾಗು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಶಿಕ್ಷಣ ತಜ್ಞ ಆರ್.ಎ. ಚೇತನ್ ರಾಮ್ ಮಾತನಾಡಿ, ನಮ್ಮ ಆಲೋಚನೆ ಸಕಾರಾತ್ಮಕವಾಗಿರಬೇಕು. ಅಂಕಗಳು ಜೀವನದಲ್ಲಿ ನಿರ್ಧಾರಕವಲ್ಲ. ಜ್ಞಾನದ ಜೊತೆ ಕೌಶಲ, ಆತ್ಮಬಲ ಮಹತ್ವದ್ದಾಗಿದೆ. ಮಾನವೀಯ ಮೌಲ್ಯ, ಸಮಾಜ ಸೇವೆ, ನೊಂದವರ ನೆರವಿಗೆ ಧಾವಿಸುವುದು ಮುಖ್ಯವಾದುದು. ಮಕ್ಕಳು ಆಸಕ್ತಿದಾಯಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆಪ್ತ ಸಮಾಲೋಚನೆ ನಡೆಸುವ ಕೇಂದ್ರ ತೆರೆಯಬೇಕು. ಇದು ವಿದ್ಯಾರ್ಥಿಗಳ ಶೈಕ್ಷಣಿಕ ಸ್ಥಿತಿ ಸುಧಾರಿಸಲು ಅನುಕೂಲವಾಗುತ್ತದೆ. ಮೊಬೈಲ್ ಗೀಳು ಕಡಿಮೆಮಾಡಿ ಓದುವ ಹವ್ಯಾಸರೂಢಿಸಿಕೊಳ್ಳಬೇಕು. ಓದುವ ಕೌಶಲ, ಪರೀಕ್ಷೆಯ ಕೌಶಲ, ಸ್ಪರ್ಧಾತ್ಮಕ ಪರೀಕ್ಷೆಯ ಕೌಶಲ ತಿಳಿದಿರಬೇಕು ಎಂದರು.

ಡಿವೈಎಸ್‌ಪಿ ಕುಮಾರ್, ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಂ.ಆರ್. ಅನಿಲ್ ಕುಮಾರ್, ಖಜಾಂಚಿ ಸಿ.ಸಿ. ಚೇತನ್ ಮಾತನಾಡಿದರು.

ಪ್ರಾಂಶುಪಾಲ ಸುನೀಲ್ ಪ್ಯಾಟ್ರಿಕ್, ಅಧ್ಯಕ್ಷೆ ಪಿ. ಸರೋಜದೇವಿ, ನಿರ್ದೇಶಕ ತಿರುಮಲ ಪ್ರಸಾದ್ ಭಾಗವಹಿಸಿದ್ದರು.

# ರೈತರ ಹಿತಾಸಕ್ತಿ ಕಾಪಾಡಲು ರಾಜ್ಯಾದ್ಯಂತ ಪ್ರವಾಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ರಾಜ್ಯ ಸರ್ಕಾರ ರೈತರನ್ನು ಸಂಪೂರ್ಣ ಕಡೆಗಣಿಸಿದೆ. ಈ ಹಿನ್ನೆಲೆ ರೈತ ಸಂಘ ರಾಜ್ಯದ ಪ್ರತಿ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ರೈತರ ಕುಂದು ಕೊರತೆ ಆಲಿಸಿ, ಜನಾಂದೋಲನ ರೂಪಿಸಲಾಗುತ್ತಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಸಂಗಣ್ಣ ಬಾಗೇವಾಡಿ ತಿಳಿಸಿದರು.

ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಸರಿಯಾಗಿ ನಡೆಯುತ್ತಿಲ್ಲ. ಕೃಷಿ ಸಚಿವರನ್ನು ಕೇಳಿದರೆ ಕೇಂದ್ರ ಸರ್ಕಾರ ಹಣ ಒದಗಿಸಿಲ್ಲ ಎನ್ನುತಾರೆ. ರಾಜ್ಯ ಸರ್ಕಾರ ಕೇವಲ ಕಣ್ಣೊರೆಸುವ ಕೆಲಸ ಮಾಡುತ್ತಿದೆ. ಭತ್ತ ಖರೀದಿ ಕೇಂದ್ರವನ್ನೂ ಆರಂಭಿಸಿಲ್ಲ. ಹಾಗಿದ್ದರೆ ಹೆಚ್ಚು ಬೆಳೆ ಬೆಳೆದಿದ್ದನ್ನು ರೈತರು ಎಲ್ಲಿ ಮಾರಾಟ ಮಾಡಬೇಕು ಎಂದು ಪ್ರಶ್ನಿಸಿದರು.

ಎಂಎಸ್‌ಪಿ ಹಣ ಬಿಡುಗಡೆಯಾದರೆ ಮಾತ್ರ ಖರೀದಿ ಕೇಂದ್ರ ಆರಂಭ ಮಾಡುತ್ತೇವೆ ಎನ್ನುತ್ತಾರೆ. ಫಸಲು ಸಂಸ್ಕರಣೆ ಮಾಡಲು ನಮಗೆ ಕೋಲ್ಡ್ ಸ್ಟೋರೇಜ್ ಕೊಟ್ಟಿದ್ದಾರಾ ಎಂದು ಪ್ರಶ್ನೆ ಮಾಡಿದ ಅವರು ಈ ಎಲ್ಲಾ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಫೆ.6 ರಂದು ತಾಲ್ಲೂಕಿನ ಶಾಂತಿಗ್ರಾಮದಲ್ಲಿ ರೈತರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತುಂಗಭದ್ರ ಅಣೆಕಟ್ಟೆ ಹೂಳು ತೆಗೆಯುವುದಾಗಿ, ಡ್ಯಾಂ ಎತ್ತರ ಮಾಡುವುದಾಗಿ ಈ ಸರ್ಕಾರ ಭರವಸೆ ನೀಡಿತ್ತು. ಆದರೆ, ಈವರೆಗೂ ಯಾವುದೇ ಕೆಲಸ ಆಗಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ 5300 ಕೋಟಿರೂ. ಕೊಡುವುದಾಗಿ ಹೇಳಿತು. ಆದರೆ ಯಾರ ನಿರ್ಲಕ್ಷ್ಯವೋ ಗೊತ್ತಿಲ್ಲ. ಆ ಹಣ ಬರಲಿಲ್ಲ. ಉತ್ತರ ಕರ್ನಾಟಕ ಭಾಗದಲ್ಲಿ ಏಳು ನದಿ ಹರಿಯುತ್ತಿವೆ. ಆದರೂ ಅನೇಕ ನೀರಾವರಿ ಯೋಜನೆಗಳು ಸಾಕಾರಗೊಂಡಿಲ್ಲ, ನೆನೆಗುದಿಗೆ ಬಿದ್ದಿವೆ ಎಂದು ದೂರಿದರು.

ಜಲ ಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿಗೆ ಮಾತ್ರ ಸೀಮಿತವಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರೈತರ ಬಗ್ಗೆ ಕಾಳಜಿಯೇ ಇಲ್ಲವಾಗಿದೆ. ಯಾವುದೇ ಬೆಳೆನಷ್ಟಕ್ಕೆ ಸೂಕ್ತ ಪರಿಹಾರ ಕೊಡುತ್ತಿಲ್ಲ, ಬೆಳೆ ವಿಮೆ ಪರಿಹಾರವೂ ಇಲ್ಲವಾಗಿದೆ. ಇದಕ್ಕಾಗಿ ರಾಜ್ಯವ್ಯಾಪಿ ಆಂದೋಲನ ಮಾಡಲಾಗುತ್ತಿದೆ ಎಂದರು.

ಜಿಲ್ಲಾಧ್ಯಕ್ಷ ಮಂಜುನಾಥ್ ಮಾತನಾಡಿ, ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆ ಸರಿಪಡಿಸಬೇಕು. ಮೆಕ್ಕೆಜೋಳಕ್ಕೆ ಸರಿಯಾದ ಬೆಲೆ ಕೊಡಬೇಕೆಂದು ಒತ್ತಾಯಿಸಿದರೆ, ತಾಲ್ಲೂಕು ಅಧ್ಯಕ್ಷ ದೇವೇಗೌಡ ಅವರು, ಮೆಕ್ಕೆಜೋಳ, ರಾಗಿ, ಆಲೂಗೆ ವಿಮೆ ಪರಿಹಾರ ಕೊಡಬೇಕು, ತೆಂಗುಗೆ ತಗುಲಿರುವ ನುಸಿರೋಗ ತಡೆಗೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ರೈತ ಮುಖಂಡರಾದ ದಯಾನಂದ್, ಎಫ್.ಕೆ.ಪೂಜಾರ್ ಇದ್ದರು.

# ಜ.11 ರಿಂದ ಜಿಲ್ಲಾದ್ಯಂತ ಜೆಡಿಎಸ್ ಪೂರ್ವಭಾವಿ ಸಭೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಜ.24ರಂದು ಜೆಡಿಎಸ್ ಬೃಹತ್ ಸಮಾವೇಶ ಹಮ್ಮಿಕೊಂಡಿರುವ ಹಿನ್ನೆಲೆ ಜ.11 ರಿಂದ ಜಿಲ್ಲಾದ್ಯಂತ ಪೂರ್ವಭಾವಿ ಸಭೆ ನಡೆಸಲಾಗುವುದು ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ತಿಳಿಸಿದರು.

ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಜ.11 ರಂದು ಬೇಲೂರು ಚನ್ನಕೇಶವನಿಗೆ ವಿಶೇಷ ಪೂಜೆ ಸಲ್ಲಿಸಿ, ಬೇಲೂರು ಪಟ್ಟಣದಲ್ಲಿ ಮೊದಲ ಪೂರ್ವಭಾವಿ ಸಭೆ ನಡೆಸಲಾಗುವುದು. ಅದೇ ದಿನ ಚನ್ನರಾಯಪಟ್ಟಣ ತಾಲ್ಲೂಕು ದಂಡಿನಗನಹಳ್ಳಿಯಲ್ಲಿ ಸಭೆ ನಡೆಲಿದೆ. ಜ.12 ರಂದು ಹೊಳೆನರಸೀಪುರದಲ್ಲಿ, ಅದೇ ದಿನ ಮಧ್ಯಾಹ್ನ ಸಕಲೇಶಪುರದಲ್ಲಿ ಜ.13 ರಂದು ಆಲೂರಿನಲ್ಲಿ ಸಭೆ ನಡೆಯಲಿದೆ. ಸಂಕ್ರಾಂತಿ ನಂತರ ಜ.17 ಬೆಳಿಗ್ಗೆ ಅರಕಲಗೂಡು, ಮಧ್ಯಾಹ್ನ ಅರಸೀಕೆರೆಯಲ್ಲಿ ಮುಖಂಡರು, ಕಾರ್ಯಕರ್ತರ ಸಭೆ ನಡೆಯಲಿದೆ. ಜ.19 ರಂದು ಮಧ್ಯಾಹ್ನ ಹಾಸನದಲ್ಲಿ ಅಂತಿಮ ಪೂರ್ವ ಸಿದ್ಧತಾ ಸಭೆ ನಿಗದಿಯಾಗಿದೆ ಎಂದು ವಿವರಿಸಿದರು.

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರ ಮಾರ್ಗದರ್ಶನದಲ್ಲಿ ಪೂರ್ವ ಸಿದ್ಧತೆ, ಪೂರ್ವಭಾವಿ ಸಭೆಗಳನ್ನು ನಡೆಸಲಾಗುತ್ತಿದೆ. ಎಲ್ಲರೂ ಸಹಕಾರ ನೀಡುವ ಮೂಲಕ ಸಮಾವೇಶ ಯಶಸ್ವಿಗೊಳಿಸಿ ಎಂದು ಮನವಿ ಮಾಡಿದರು. ರೇವಣ್ಣ ಅವರು ಅರಸೀಕೆರೆಯಿಂದ ಸ್ಪರ್ಧೆ ಮಾಡುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಪ್ರಜಾಪ್ರಭುತ್ವ, ಯಾರು ಎಲ್ಲಿ ಬೇಕಾದರೂ ಕಣಕ್ಕಿಳಿಯಬಹುದು. ರೇವಣ್ಣ ಅವರು ಏನನ್ನೂ ಹೇಳಿಲ್ಲ, ಮುಂದೆ ನೋಡೋಣ, ಅರಸೀಕೆರೆ ಮುಖಂಡರು ಆಹ್ವಾನಿಸಬಹುದು. ಆದರೆ ನಮಗೆ ಮಾಹಿತಿ ಇಲ್ಲ. ಜಿಲ್ಲೆಗೆ ರೇವಣ್ಣ ಅವರ ಕೊಡುಗೆ ಇದ್ದು, ಅಭಿವೃದ್ಧಿ ಹರಿಕಾರ ಎನಿಸಿಕೊಂಡಿದ್ದಾರೆ. ಈ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದರು.

ತಾಲ್ಲೂಕು ಅಧ್ಯಕ್ಷ ಎಸ್ .ದ್ಯಾವೇಗೌಡ, ಮುಖಂಡರಾದ ಲಕ್ಷ್ಮಣ್‌ಗೌಡ, ಹೊನ್ನವಳ್ಳಿ ಸತೀಶ್, ಸತ್ಯಮಂಗಲ ರಘು, ಸಮೀರ್ ಇದ್ದರು.

# ನಾಳೆ ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಕರಾಟೆ ಅಸೋಸಿಯೇಷನ್ ವತಿಯಿಂದ ಹಾಸನ್ ಓಪನ್ 5ನೇ ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿಯನ್ನು ಜ.11 ರಂದು ನಗರದ ಮಲ್ನಾಡ್ ಇಂಜಿನೀಯರಿಂಗ್ ಕಾಲೇಜಿನ ಆಡಿಟೋರಿಯಂನಲ್ಲಿ ಆಯೋಜಿಸಲಾಗಿದೆ ಎಂದು ಅಸೋಸಿಯೇಷನ್ ಅಧ್ಯಕ್ಷ ಮೊಹಮ್ಮದ್ ಆರಿಫ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಕರಾಟೆ ಪಂದ್ಯಾವಳಿಗೆ ಮಹಾರಾಷ್ಟ್ರ, ತೆಲಂಗಾಣ, ತಮಿಳುನಾಡು ಸೇರಿ ಕರ್ನಾಟಕದ 12 ಜಿಲ್ಲೆಗಳಿಂದ ಸುಮಾರು 800ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. 6 ರಿಂದ 18 ವರ್ಷ ವಯೋಮಿತಿಯ ಬಾಲಕ-ಬಾಲಕಿಯರು ಈ ಕ್ರೀಡಾಕೂಟದಲ್ಲಿ ಸ್ಪರ್ಧಿಸಬಹುದಾಗಿದೆ ಎಂದು ಹೇಳಿದರು.

ಪಂದ್ಯಾವಳಿ ಉದ್ಘಾಟನೆಯನ್ನು ಅಂದು ಬೆಳಿಗ್ಗೆ 10.30ಕ್ಕೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದ ಶ್ರೇಯಸ್ ಪಟೇಲ್, ಕನ್ನಡ ಚಲನಚಿತ್ರ ಕಲ್ಟ್ ಸಿನಿಮಾ ನಟ ಜಾತ್ಮನ್ ಭಾಗವಹಿಸಲಿದ್ದಾರೆ. ಕರ್ನಾಟಕ ರಾಜ್ಯ ಕರಾಟೆ ಅಸೋಸಿಯೇಶನ್ ರಾಜ್ಯಾಧ್ಯಕ್ಷ ಶಿಹಾನ್, ಶಿವಮೊಗ್ಗ ವಿನೋದ್ ಅವರು ವಹಿಸಲಿದ್ದಾರೆ. ಪಂದ್ಯಾವಳಿಯಲ್ಲಿ ಕತಾ ಹಾಗು ಕುಮಿತೆ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಜೊತೆಗೆ ಓಪನ್ ಫೈಟ್ ಕೂಡ ಆಯೋಜಿಸಲಾಗಿದೆ. ವಿವಿಧ ವಿಭಾಗಗಳಲ್ಲಿ ವಿಜೇತರಾಗುವ ವಿದ್ಯಾರ್ಥಿಗಳಿಗೆ 5,000 ನಗದು ಬಹುಮಾನ ಜೊತೆಗೆ ಆಕರ್ಷಕ ಟ್ರೋಫಿ ಹಾಗೂ ಪ್ರಮಾಣ ಪತ್ರ ನೀಡಲಾಗುವುದು ಎಂದರು.

ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಆಯೋಜಿಸಲಾಗಿರುವ ರಾಷ್ಟ್ರಮಟ್ಟದ ಕರಾಟೆ ಪಂದ್ಯಾವಳಿಗೆ ಕ್ರೀಡಾಭಿಮಾನಿಗಳು, ಪೋಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು. ಖಜಾಂಚಿ ಯೂಸೆಫ್, ಕಾರ್ಯದರ್ಶಿ ಜಮೀರ್, ಬ್ಲಾಕ್ ಬೆಲ್ಟ್ ವಿದ್ಯಾರ್ಥಿ ತಂದೆ ಅನಂತ್, ನಿಹಾಲ್ ಅರ್ಪಸ್ ಇದ್ದರು.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ಹಾಗೂ ಹಿರೀಸಾವೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದಾರೆ.

ಬೈಕ್ ಡಿಕ್ಕಿಯಾಗಿ ಮತ್ತೊಂದು ಬೈಕ್ ಸವಾರ ಮೃತಪಟ್ಟಿರುವ ಘಟನೆ ಅರಸೀಕೆರೆಯ ಎಸ್‌ಬಿಐ ಬ್ಯಾಂಕ್ ಸಮೀಪ ನಡೆದಿದೆ. ಮಿನಿವಿಧಾನಸೌಧ ಪಕ್ಕದ ನಿವಾಸಿ ಎನ್.ಜಿ.ಮಹೇಶ್ (43) ಮೃತರು. ಜ. 1ರಂದು ಕೆಲಸ ಮುಗಿಸಿ ಮನೆಗೆ ಹೋಗುತ್ತಿದ್ದಾಗ ಬಸ್ ನಿಲ್ದಾಣ ಕಡೆಯಿಂದ ವೇಗವಾಗಿ ಬಂದ ಬೈಕ್ ಸವಾರ ಡಿಕ್ಕಿ ಮಾಡಿದ್ದಾನೆ. ಅಪಘಾತದ ರಭಸಕ್ಕೆ ಮಹೇಶ್ ಅವರು ಕೆಳಗೆ ಬಿದ್ದು ಗಂಭೀರ ಗಾಯಗೊಂಡಿದ್ದರು. ಸಾರ್ವಜನಿಕರು ಆ್ಯಂಬುಲೆನ್ಸ್ ಮೂಲಕ ಹಿಮ್ಸ್‌ಗೆ ದಾಖಲಿಸಿದ್ದರು. ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಬುಧವಾರ ಮೃತಪಟ್ಟಿದ್ದಾರೆ. ಅರಸೀಕೆರೆ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಟ್ರ್ಯಾಕ್ಟರ್‌ನ ಟೈಯರ್ ಹರಿದು ಚಾಲಕ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕು ನುಗ್ಗೇಹಳ್ಳಿ ಹೋಬಳಿ ದೊಡ್ಡೇರಿ ಕಾವಲು ಗ್ರಾಮದಲ್ಲಿ ನಡೆದಿದೆ.

ತಿಪಟೂರು ತಾಲ್ಲೂಕು ಅಲ್ಬೂರು ಗ್ರಾಮದ ರಂಗಸ್ವಾಮಿ ಮೃತರು. ಟ್ರ್ಯಾಕ್ಟರ್ ಚಾಲಕನಾಗಿದ್ದ ರಂಗಸ್ವಾಮಿ ಜ. 5ರಂದು ಟ್ರ್ಯಾಕ್ಟರ್‌ನಲ್ಲಿ ಮಣ್ಣು ತುಂಬಿಕೊಂಡು ನಾಗಣ್ಣ ಎಂಬುವವರ ತೋಟಕ್ಕೆ ಸರಬರಾಜು ಮಾಡುತ್ತಿದ್ದಾಗ ಟ್ರ್ಯಾಕ್ಟರ್‌ನ ಎಕ್ಸಿಲೇಟರ್ ಅನ್ನು ಜೋರಾಗಿ ತುಳಿದಿದ್ದರಿಂದ ವಾಹನ ಮೇಲಿಂದ ಚಕ್ರದಡಿ ಸಿಲುಕಿ ಮೃತಪಟ್ಟಿದ್ದಾರೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜನವರಿ-10

1920: ಲೀಗ್ ಆಫ್ ನೇಷನ್ಸ್ ಅಧಿಕೃತವಾಗಿ ಕಾರ್ಯಾರಂಭ ಮಾಡಿತು. ಇದು ನಂತರದ ಸಂಯುಕ್ತ ರಾಷ್ಟ್ರ ಸಂಸ್ಥೆಗೆ ಆಧಾರವಾಯಿತು.

1946: ಮೊದಲ ಸಂಯುಕ್ತ ರಾಷ್ಟ್ರಗಳ ಸಾಮಾನ್ಯ ಸಭೆ ಲಂಡನ್‌ನಲ್ಲಿ ಆರಂಭವಾಯಿತು.

1957: ಭಾರತದ ಮೊದಲ ತ್ರಿವರ್ಣ ಧ್ವಜದ ಅಂಚೆ ಚೀಟಿ ಬಿಡುಗಡೆಗೊಂಡಿತು.

1966: ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧ ಅಂತ್ಯಕ್ಕೆ ಸಂಬಂಧಿಸಿದ ತಾಷ್ಕೆಂಟ್ ಒಪ್ಪಂದಕ್ಕೆ ಸಹಿ ಹಾಕಲಾಯಿತು.

2008: ಭಾರತ ತನ್ನ ಮೊದಲ ಮಾನವ ಸಹಿತ ಚಂದ್ರಯಾನ ಕಾರ್ಯಕ್ರಮದ ಯೋಜನೆಗಳನ್ನು ಅಧಿಕೃತವಾಗಿ ಘೋಷಿಸಿತು.

**ಜನನ**

1897: ಸುಭಾಷ್ ಚಂದ್ರ ಬೋಸ್, ಸ್ವಾತಂತ್ರ್ಯ ಹೋರಾಟಗಾರ

1949: ಜಾರ್ಜ್ ಫೋರ್ಮನ್, ವಿಶ್ವ ಪ್ರಸಿದ್ಧ ಬಾಕ್ಸರ್

# ಮ್ಯಾಗ್ನೆಟ್ ಶಾಲೆ ವಿರೋಧಿಸಿ ಎಐಡಿಎಸ್‌ಓ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಮ್ಯಾಗ್ನೆಟ್ ಶಾಲೆಯ ಮೂಲಕ ಸಾರ್ವತ್ರಿಕ ಶಿಕ್ಷಣದ ಹರಣ ಮಾಡಲಾಗುತ್ತಿದೆ ಎಂದು ಆರೋಪಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಹೊಸೂರಿನಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ಪ್ರತಿಭಟನೆ ನಡೆಸಿದರು.

ಹೊಸೂರಿನ ಶಾಲೆಯಲ್ಲಿ 17 ಜನ ಮಕ್ಕಳು ಓದುತ್ತಿದ್ದಾರೆ. ಇಲ್ಲಿನ ಮಕ್ಕಳ ತಂದೆ ತಾಯಿಯರು ವಲಸೆ ಕೂಲಿ ಕಾರ್ಮಿಕರು, ತಿಂಗಳಿಗೆ ಒಂದೇ ದಿನ ಅವರು ಮನೆಗೆ ಬರುವುದು. ಇಡೀ ತಿಂಗಳು ರಾಜ್ಯದ ಮೂಲೆ ಮೂಲೆಗಳಲ್ಲಿ ದುಡಿಯಲು ಹೋಗುತ್ತಾರೆ. ಈ ಊರಿನ ಶಾಲೆ ಮುಚ್ಚಿದರೆ ಇವರ ಭವಿಷ್ಯವೇ ಇಲ್ಲದಂತಾಗುತ್ತದೆ.

ಈ ಮಕ್ಕಳು ತಮ್ಮ ತಂದೆ ತಾಯಿಯ ವೃತ್ತಿಯನ್ನೇ ಮುಂದುವರಿಸಬೇಕಾಗುತ್ತದೆ. ಹಾಗಾಗಿ ಈ ಶಾಲೆ ಉಳಿಯಲೇ ಬೇಕು ಎಂದು ಆಗ್ರಹಿಸಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆ ಇದೆ, ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳುಹಿಸುತ್ತಿಲ್ಲ ಎಂದು ಬೊಬ್ಬಿರಿಯುವ ಸರ್ಕಾರ, ಸಚಿವರು ಹಾಗೂ ಚುನಾಯಿತ ಪ್ರತಿನಿಧಿಗಳಿಗೆ ಕನಿಷ್ಠ ನೈತಿಕತೆ ಇಲ್ಲ. ಉತ್ತರ ಕರ್ನಾಟಕದ ಹಳ್ಳಿ ಶಾಲೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಇದ್ದರೂ 10 ಮಕ್ಕಳು ಇದೆ ಶಾಲೆಗಳಲ್ಲಿ ಇಂದಿಗೂ ಶಿಕ್ಷಣ ಪಡೆಯುತ್ತಿದ್ದಾರೆ.

ಇದು ಸರ್ಕಾರಕ್ಕೆ ಕಾಣುತ್ತಿಲ್ಲವೇ ಎಂದು ಪ್ರಶ್ನಿಸಿ, ಸರ್ಕಾರಿ ಶಾಲೆಗಳಿಗೆ ಬೇಕಿರುವುದು ಶಿಕ್ಷಕರು ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವಂತೆ ಒತ್ತಾಯಿಸಿದರು.

ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಚೈತ್ರ, ಗ್ರಾಮಸ್ಥರಾದ ಲಕ್ಷ್ಮಿ, ಕುಮಾರ್, ಗಿರೀಶ್, ದೇವರಾಜ್, ಪಾರ್ವತಿ, ಸುರೇಶ್, ವಿದ್ಯಾರ್ಥಿಗಳು ಹಾಜರಿದ್ದರು.

# ಕೊಣನೂರಿನಲ್ಲಿ ಆಟೋ ನಿಲುಗಡೆಗೆ ಜಾಗವಿಲ್ಲ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಕೊಣನೂರು: ಅರಕಲಗೂಡು ತಾಲ್ಲೂಕಿನ ಕೊಣನೂರು ಪಟ್ಟಣದಲ್ಲಿ ಆಟೋ ನಿಲುಗಡೆಗೆ ಸೂಕ್ತ ಸ್ಥಳಾವಕಾಶವಿಲ್ಲದೆ ಚಾಲಕರು ಪರದಾಡುತ್ತಿದ್ದಾರೆ.

ರಸ್ತೆ ಬದಿಯ ಫುಟ್‌ಪಾತ್ ಮೇಲೆ ಆಟೋ ನಿಲ್ಲಿಸುತ್ತಿರುವುದರಿಂದ ಪಾದಚಾರಿಗಳಿಗೂ ಭಾರೀ ತೊಂದರೆಯಾಗುತ್ತಿದೆ. ನಿಗದಿತ ಜಾಗದಲ್ಲಿ ಸುಸಜ್ಜಿತ ಶೆಲ್ಟರ್ ನಿರ್ಮಿಸುವಂತೆ ಹಲವು ವರ್ಷಗಳಿಂದ ಆಟೋ ಚಾಲಕರು ಮನವಿ ಮಾಡಿಕೊಂಡರೂ ಪ್ರಯೋಜನವಾಗುತ್ತಿಲ್ಲ. ಹೀಗಾಗಿ ಮಳೆ, ಬಿಸಿಲು, ಚಳಿ ಎನ್ನದೆ ರಸ್ತೆ ಪಕ್ಕದಲ್ಲೇ ವಾಹನ ನಿಲ್ಲಿಸುವಂತಾಗಿದೆ.

ರಾಮನಾಥಪುರ, ದೊಡ್ಡಮಗ್ಗೆ, ಅರಕಲಗೂಡಿನಲ್ಲಿ ಆಟೋ ಚಾಲಕರಿಗೆ ತಂಗುದಾಣ ನಿರ್ಮಿಸಿಕೊಟ್ಟಿದ್ದಾರೆ. ಆದರೆ ಕೊಣನೂರು ಪಟ್ಟಣದಲ್ಲಿ ಮಾತ್ರ ವ್ಯವಸ್ಥೆ ಇಲ್ಲದಂತಾಗಿದೆ. ಚುನಾವಣೆ ಸಂದರ್ಭದಲ್ಲಿ ಬಂದು ಮತ ಕೇಳುವ ಜನಪ್ರತಿನಿಧಿಗಳು ನಿಲ್ದಾಣದ ಸಮಸ್ಯೆಗೆ ಪರಿಹಾರ ಕಲ್ಪಿಸಲು ಹಿಂದೇಟು ಹಾಕುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಸ್ಥಳೀಯರು ಪ್ರಶ್ನಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248